ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಗುರುವಾರ, ದಿನಾಂಕ: 4ನೇ ಫೆಬ್ರುವರಿ, 2021

ಎಸ್.ಸಿ.ಪಿ/ಟಿ.ಎಸ್.ಪಿ ಕಾಮಗಾರಿಗಳ ಬಗ್ಗೆ

ಶ್ರೀ ಎಂ.ಎ.ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

356(445) ಮಾನ್ಯ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಹಾಸನ ಜಿಲ್ಲೆಯಲ್ಲಿ ಕಳೆದ 3 ವರ್ಷಗಳಲ್ಲಿ ಸಣ್ಣ ನೀರಾವರಿ ಇಲಾಖೆಯಿಂದ ಎಸ್.ಸಿ.ಪಿ/ಟಿ.ಎಸ್.ಪಿ ಯೋಜನೆಯಡಿ ಕೈಗೆತ್ತಿಕೊಳ್ಳಲಾದ ಕಾಮಗಾರಿಗಳು ಯಾವುವು; ಈ ಕಾಮಗಾರಿಗಳಿಗೆ ಮಂಜೂರಾದ ಅನುದಾನವೆಷ್ಟು; ಖರ್ಚಾದ ಅನುದಾನವೆಷ್ಟು; (ಕಾಮಗಾರಿವಾರು ವಿವರ ನೀಡುವುದು)

(ಆ) ಕಳೆದ 3 ವರ್ಷಗಳಲ್ಲಿ ಸಣ್ಣ ನೀರಾವರಿ ಇಲಾಖೆಯಿಂದ ಎಸ್.ಸಿ.ಪಿ/ಟಿ.ಎಸ್.ಪಿ ಯೋಜನೆಯಡಿ ಸೋಲಾರ್/ವಿದ್ಯುತ್ ಚಾಲಿತ ಕೊಳವೆ ಬಾವಿಗಳನ್ನು ಕೊರೆಸಲು ನಿಗದಿಪಡಿಸಿರುವ ಆರ್ಥಿಕ ಮತ್ತು ಭೌತಿಕ ಗುರಿಗಳೇನು; ಈ ಯೋಜನೆಯಡಿ ನಿರ್ಮಿಸಲಾದ ಸೋಲಾರ್/ವಿದ್ಯುತ್ ಚಾಲಿತ ಕೊಳವೆ ಬಾವಿಗಳೆಷ್ಟು; ಇದಕ್ಕಾಗಿ ಸರ್ಕಾರವು ಬಿಡುಗಡೆ ಮಾಡಿದ ಅನುದಾನವೆಷ್ಟು; ಖರ್ಚಾದ ಅನುದಾನವೆಷ್ಟು ? (ಫಲಾನುಭವಿ ಹೆಸರು, ಜಾತಿ, ಗ್ರಾಮ, ಹೋಬಳಿ, ತಾಲ್ಲೂಕು ವಿವರ ನೀಡುವುದು)